ಪದವಿ ಪೂರ್ವ ಕಾಲೇಜುಗಳಿಗೆ ಹುದ್ದೆಗಳನ್ನು ಮಂಜೂರು ಮಾಡುವ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) -

17 (243) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪದವಿ ಪೂರ್ವ ಕಾಲೇಜುಗಳ ವಿವರ ನೀಡುವುದು)

(ಆ) ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಪದವಿ ಕಾಲೇಜುಗಳಿಂದ ಹಸ್ತಾಂತರಿಸಿದ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಹಾಗೂ ಕಾಲೇಜುವಾರು ಮಾಹಿತಿ ನೀಡುವುದು)

(ಇ) ಪದವಿ ಕಾಲೇಜುಗಳಿಂದ ಪದವಿ ಪೂರ್ವ ಕಾಲೇಜುಗಳಿಗೆ ಹಸ್ತಾಂತರ ಮಾಡಿದ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಆಡಳಿತ ಮಂಡಳಿಯವರು ಭರ್ತಿ ಮಾಡಿಕೊಂಡಿರುತ್ತಾರೆ ಹಾಗೂ ಭರ್ತಿ ಮಾಡಿಕೊಳ್ಳದೆ ಉಳಿದ ಹುದ್ದೆಗಳು ಎಷ್ಟು ; (ವಿವರ ನೀಡುವುದು)

(ಈ) ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಹುದ್ದೆಗಳನ್ನು ಹಸ್ತಾಂತರ ಮಾಡಿದ ನಂತರವೂ ಇನ್ನೂ ಮಂಜೂರು ಮಾಡಬೇಕಾದ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕುರಿತು ಹೊಸ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?